1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

**ಕ್ರಿ ಮೊ ಸಂಖ್ಯೆ 10/2021**

ಪಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

-ವಿರುದ್ಧ-

ಆರೋಪಿ/ತರು ಃ ಈಶ್ವರಪ್ಪ ಬಿನ್ ಗೋವಿಂದರೆಡ್ಡಿ

ದಂ.ಪ್ರ.ಸಂ. ಕಲಂ **313** ರಡಿಯಲ್ಲಿ ಆರೋಪಿಯ ವಿಚಾರಣಾ ಹೇಳಿಕೆ

ಪ್ರಶ್ನೆ-1ಃ ಅಭಿಯೋಜನೆ ಪರ ಸಾಕ್ಷಿಗಳ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?
ಉತ್ತರ ಃ ಹೌದು

ಪ್ರಶ್ನೆ-2ಃ ಪ್ರಾಸಾ-1 ರೇಣುಕಮ್ಮ ಇವರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕ 26.06.2020 ರಂದು ಸಿದ್ದರಹಳ್ಳಿಯಲ್ಲಿರುವ ತಮ್ಮ ಜಮೀನಿನಲ್ಲಿ ತಾನು ಹಾಗೂ ತನ್ನ ಗಂಡ ಕೆಲಸ ಮಾಡುತ್ತಿರುವಾಗ ಆರೋಪಿಯಾದ ನೀವು ತಮ್ಮ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಇದು ನನ್ನ ಜಮೀನು ನೀವು ಕೆಲಸ ಮಾಡಬಾರದೆಂದು ತಮ್ಮನ್ನು ಅವಾಚ್ಯ ಶಬ್ದಗಳಿಂದ ಬೈದು ತನ್ನ ತಲೆ ಕೂದಲನ್ನು ಹಿಡಿದು ಎಳೆದಾಡಿ ಅಲ್ಲೇ ಬಿದ್ದಿದ್ದ ಒಂದು ಕಲ್ಲನ್ನು ತೆಗೆದುಕೊಂಡು ತನ್ನ ಸೊಂಟಕ್ಕೆ ಹೊಡೆದು ತಮ್ಮ ಮೇಲೆ ಹಲ್ಲೆ ಮಾಡಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?
ಉತ್ತರ ಃ ಸುಳ್ಳು

ಪ್ರಶ್ನೆ-3 ಃ ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಲಿಂಗದಹಳ್ಳಿಯ ಸರ್ಕಾರಿ ಆಸ್ಪತ್ರೆಯಲ್ಲಿ ತಾನು ಚಿಕಿತ್ಸೆ ಪಡೆದುಕೊಂಡಿದ್ದು, ಮರುದಿನ ತಮಗೆ ಜಮೀನಿನಲ್ಲಿ ಆಲೂಗೆಡ್ಡೆ ಹಾಕಲು ಅಡ್ಡಗಟ್ಟಿ ಬಿಟ್ಟಿರುವುದಿಲ್ಲ, ನಂತರ ತಾವು ಲಿಂಗದಹಳ್ಳಿ ಪೊಲೀಸ್ ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇವೆ, ತಾವು ದೂರು ಕೊಟ್ಟ ದಿನದಂದು ಪೊಲೀಸರು ಕೃತ್ಯ ನಡೆದ ಸ್ಥಳಕ್ಕೆ ಬಂದು ಮಹಜರು ಕ್ರಮವನ್ನು ಜರುಗಿಸಿರುತ್ತಾರೆ, ಪೊಲೀಸರು ತನ್ನ ಸಮಕ್ಷಮ ಒಂದು ಕಲ್ಲನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?
ಉತ್ತರ ಃ ಸುಳ್ಳು

ಪ್ರಶ್ನೆ-4 ಃ ಪ್ರಾಸಾ-2 ಷಣ್ಮುಗಪ್ಪರವರು ತಮ್ಮ ಸಾಕ್ಷ್ಯದಲ್ಲಿ, ಈಗ್ಗೆ ಸುಮಾರು 5 ವರ್ಷಗಳ ಹಿಂದೆ ತಾನು ಸಿದ್ದರಹಳ್ಳಿ ಗ್ರಾಮದಲ್ಲಿ ಹೊಲದಲ್ಲಿ ಸಂಜೆ 05.00 ಗಂಟೆ

ಪೊಲೀಸರು ಬಂದು ಗಲಾಟೆಯಾದ ವಿಚಾರವಾಗಿ ಮಹಜರು ಕ್ರಮವನ್ನು ಜರುಗಿಸಿ ಛಾಯಚಿತ್ರವನ್ನು ತೆಗೆದಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-5 ಃ ಪ್ರಾಸಾ-3 ಮಂಜುನಾಥ್ ಇವರು ತಮ್ಮ ಸಾಕ್ಷ್ಯದಲ್ಲಿ, ಈಗ್ಗೆ ಸುಮಾರು 5-6 ವರ್ಷಗಳ ಹಿಂದೆ ತಾನು ಸಿದ್ದರಹಳ್ಳಿ ಗ್ರಾಮದಲ್ಲಿ ಸಂಜೆ 04.00 ಗಂಟೆ ಸಮಯದಲ್ಲಿ ಪೊಲೀಸರು ಗಲಾಟೆಯ ವಿಚಾರವಾಗಿ ಮಹಜರು ಕ್ರಮ ಜರುಗಿಸಿದ್ದು, ಸದರಿ ಮಹಜರಿಗೆ ತಾನು ಸಹಿ ಮಾಡಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-6 ಃ ಪ್ರಾಸಾ-5 ನಾರಾಯಣಸ್ವಾಮಿ ಇವರು ತಮ್ಮ ಸಾಕ್ಷ್ಯದಲ್ಲಿ, ಈಗ್ಗೆ ಸುಮಾರು ಐದು ವರ್ಷಗಳ ಹಿಂದೆ ಸಿದ್ದರಹಳ್ಳಿ ಗ್ರಾಮದಲ್ಲಿ ಸರ್ವೆ ನಂ.39 ರಲ್ಲಿ ತಾವು ಆಲೂಗೆಡ್ಡೆ ಹಾಕುತ್ತಿದ್ದಾಗ ಆರೋಪಿಯಾದ ನೀವು ಏಕಾಏಕಿ ತಮ್ಮ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಆಲೂಗೆಡ್ಡೆ ಹಾಕಬೇಡಿ ಎಂದು ಜಗಳ ಮಾಡಿ ಕೆಲಸ ನಿಲ್ಲಿಸಿರುತ್ತಾರೆ, ಆರೋಪಿಯಾದ ನಿಮ್ಮ ಮೇಲೆ ತಾನು ಮರುದಿನ ಲಿಂಗದಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-7 ಃ ಪ್ರಾಸಾ-7 ಲೋಕೇಶಪ್ಪ ಇವರು ತಮ್ಮ ಸಾಕ್ಷ್ಯದಲ್ಲಿ, ಚಾಸಾ-11 ರವರು ಈ ಪ್ರಕರಣದಲ್ಲಿ ಪ್ರಥಮ ವರ್ತಮಾನ ವರದಿಯನ್ನು ದಾಖಲೆ ಮಾಡಿ ನಂತರ ಭಾಗಶಃ ತನಿಖಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ, ನಂತರದಲ್ಲಿ ತಾನು ಈ ಪ್ರಕರಣದಲ್ಲಿ ದಿನಾಂಕ 28.07.2020 ರಂದು ರೇಣುಕಾರವರ ಸಿಆರ್.ಪಿ.ಸಿ. ಕಲಂ 164 ರಡಿ ಹೇಳಿಕೆಯನ್ನು ಮಾನ್ಯ ನ್ಯಾಯಾಲಯದಿಂದ ಪಡೆದುಕೊಂಡು ನಂತರ ದಿನಾಂಕ 05.08.2020 ರಂದು ಚಾಸಾ-9 ರವರಿಂದ ಚಾಸಾ-1 ರವರ ಗಾಯದ ದೃಢೀಕರಣ ಪತ್ರವನ್ನು ಪಡೆದುಕೊಂಡಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-8 ಃ ಪ್ರಾಸಾ-7 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕ 05.08.2020 ರಂದು ಆರೋಪಿಯಾದ ನಿಮ್ಮ ವಿರುದ್ಧ ಆರೋಪ ಸಾಬೀತಾದ ಕಾರಣ ಆರೋಪಿಯಾದ ನಿಮ್ಮ ವಿರುದ್ಧ ದೋಷಾರೋಪಣಾ ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-9 ಃ ಪ್ರಾಸಾ-8 ಡಾಃ ಐಶ್ವರ್ಯ, ವೈದ್ಯಾಧಿಕಾರಿಗಳು ಇವರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕ 29.06.2020 ರಂದು ಮಧ್ಯಾಹ್ನ 01.30 ಗಂಟೆ ಸಮಯದಲ್ಲಿ ಚಾಸಾ-1 ರವರು ಹಲ್ಲೆಯ ವಿಚಾರವಾಗಿ ಲಿಂಗದಹಳ್ಳಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆ ಪಡೆಯಲು ಬಂದಿದ್ದು, ತಾನು ಚಾಸಾ-1 ರವರನ್ನು ಪರೀಕ್ಷೆ ಮಾಡಿದಾಗ ಚಾಸಾ-1 ರವರ ಬಲತೊಡೆಯಲ್ಲಿ ನೋವಿನ ಅನುಭವ ಇತ್ತು, ತನ್ನ ಅಭಿಪ್ರಾಯದಲ್ಲಿ ಮೇಲ್ಕಂಡ ಗಾಯ ಸಾಮಾನ್ಯ ಸ್ವರೂಪದ ಗಾಯವಾಗಿದ್ದು, ತಾನು ನಿಪಿ-7 ರಂತೆ ಗಾಯದ ಪ್ರಮಾಣ ಪತ್ರ ನೀಡಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-10 ಃ ಪ್ರಾಸಾ-9 ರಾಜೇಶ್.ಎಸ್. ಮುಖ್ಯಪೇದೆ, ಇವರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕ 29.06.2020 ರಂದು ತಾನು ಲಿಂಗದಹಳ್ಳಿ ಪೊಲೀಸ್ ಠಾಣೆಯಲ್ಲಿ ಎಸ್.ಹೆಚ್.ಓ. ಕರ್ತವ್ಯದಲ್ಲಿದ್ದಾಗ ತನಗೆ ಲಿಂಗದಹಳ್ಳಿ ಸರ್ಕಾರಿ ಆಸ್ಪತ್ರೆಯಿಂದ ಮಾಹಿತಿ ಬಂದ ಮೇರೆಗೆ ತಾನು ಲಿಂಗದಹಳ್ಳಿ ಸರ್ಕಾರಿ ಆಸ್ಪತ್ರೆಗೆ ಹೋಗಿ ಗಾಯಾಳು ತನ್ನ ಸಮಕ್ಷಮದಲ್ಲಿ ಹೇಳಿದಂತೆ ದಿನಾಂಕ 29.06.2020 ರಂದು 02.00 ಗಂಟೆಯಿಂದ 02.30 ರವರೆಗೆ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ, ನಂತರ ಗಾಯಾಳುವಿಗೆ ಓದಿ ಹೇಳಿ ಅವರ ಸಹಿ ಪಡೆದುಕೊಂಡು ಠಾಣೆಗೆ 02.45 ಗಂಟೆಗೆ ಬಂದು ಠಾಣಾ ಮೊಕದ್ದಮೆ ಸಂಖ್ಯೆ 83/2020 ಐಪಿಸಿ ಕಲಂ 447, 504, 354, 323, 324, 506 ಅಡಿಯಲ್ಲಿ ಕೇಸನ್ನು ದಾಖಲಿಸಿ ಆರೋಪಿಯಾದ ನಿಮ್ಮ ವಿರುದ್ಧ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ನಿವೇದಿಕೊಂಡಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-11 ಃ ಪ್ರಾಸಾ-9 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕ 30.06.2020 ರಂದು ಚಾಸಾ-10 ಹಾಗೂ ತಾನು ಚಾಸಾ-2 ಮತ್ತು 3 ರವರನ್ನು ಬರಮಾಡಿಕೊಂಡು ಅವರಿಗೆ ಪ್ರಕರಣದ ಬಗ್ಗೆ ಮಾಹಿತಿ ತಿಳಿಸಿ ಪಂಚರಾಗಿ ಬರಮಾಡಿಕೊಂಡು ಅವರಿಗೆ ನೋಟೀಸ್ ಜಾರಿ ಮಾಡಿ ಅವರ ಸಮಕ್ಷಮದಲ್ಲಿ 04.45 ರಿಂದ 05.30 ರವರೆಗೆ ಮಹಜರು ಕ್ರಮವನ್ನು ಜರುಗಿಸಿರುತ್ತೇನೆ, ನಂತರ ಪಂಚರ ಸಮಕ್ಷಮ ಚಾಸಾ-1 ರವರು ತೋರಿಸಿದ ಒಂದು ಹಿಡಿ ಗಾತ್ರದ ಕಲ್ಲನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ, ನಂತರ ಠಾಣೆಗೆ ಬಂದು ಠಾಣಾ ಪಿ.ಎಫ್. ನಂ.58/2020 ರಲ್ಲಿ ಸದರಿ ಮುದ್ದೆಮಾಲನ್ನು ನಮೂದಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ, ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-12 ರವರಿಗೆ ವಹಿಸಿಕೊಟ್ಟಿರುತ್ತೇನೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ ಸುಳ್ಳು

ಪ್ರಶ್ನೆ-12 ಃ ಈ ಕೇಸಿನ ಬಗ್ಗೆ ನೀವು ಏನಾದರೂ ಹೇಳುವುದಿದೆಯಾ?

ಉತ್ತರ ಃ ಇಲ್ಲ

ಪ್ರಶ್ನೆ-13 ಃ ನಿಮ್ಮ ಪರವಾಗಿ ಯಾರಾದರೂ ಸಾಕ್ಷಿಗಳಿದ್ದಾರಾ ಮತ್ತು ಯಾವುದಾದರೂ ದಾಖಲೆಗಳಿವೆಯಾ?
ಉತ್ತರ ಃ ಇಲ್ಲ

(ಈ ಹೇಳಿಕೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕ ಃ 08.05.2026

ಸಹಿ
**(ಊರ್ಮಿಳ.ವಿ)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.